ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 15-9-2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | 1)ಕೊಪ್ಪಳ ಜಿಲ್ಲೆಯ ಕಿನ್ನಾಳ ಕಲೆಯ ಪುನರುಜ್ಜೀವನ ಕಾರ್ಯಾಗಾರ ಹಾಗೂ ಪ್ರದರ್ಶನ:<br><br>ಉದ್ಘಾಟನೆ:<br><br>ಹೆಚ್.ಕೆ. ಪಾಟೀಲ್,<br>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು<br><br>ಮುಖ್ಯ ಅತಿಥಿ:<br><br>ಪ್ರೊ. ಎಸ್. ಶೆಟ್ಟರ್,<br>ಖ್ಯಾತ ಇತಿಹಾಸಜ್ಞರು<br><br>ಕಲಾವಿದರಿಗೆ ಶುಭ ಹಾರೈಕೆ:<br>ಐ.ಎಸ್.ಎಸ್. ಪ್ರಸಾದ್,<br>ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ | 16-09-2016<br>ಶುಕ್ರವಾರ<br>ಬೆಳಿಗ್ಗೆ<br>11-30 ಗಂಟೆಗೆ | ಚಿತ್ರಕಲಾ ಪರಿಷತ್ ಆವರಣ<br>ಕುಮಾರಕೃಪಾ ರಸ್ತೆ,<br>ಬೆಂಗಳೂರು- 560 001 |
| | 2)ಕೊಪ್ಪಳ ಜಿಲ್ಲೆಯ ಸಾಂಸ್ಕೃತಿಕ ವಿಶೇಷವಾದ ಕರಡಿ ಮಜಲು | 16-09-2016<br>ಶುಕ್ರವಾರ<br>ಸಂಜೆ<br>6 ಗಂಟೆಗೆ | ಚಿತ್ರಕಲಾ ಪರಿಷತ್ ಆವರಣ<br>ಕುಮಾರಕೃಪಾ ರಸ್ತೆ,<br>ಬೆಂಗಳೂರು- 560 001 |

| | | | |
|---|---|---|---|
| 2 | ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಬ್ರಹ್ಮಶ್ರೀ ನಾರಾಯಣಗುರು ಜಯಂತಿ.<br><br>**ಉದ್ಘಾಟನೆ:**<br><br>ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು,<br>ಕರ್ನಾಟಕ ಸರ್ಕಾರ.<br><br>**ಘನ ಉಪಸ್ಥಿತಿ:**<br><br>ಡಿ. ಹೆಚ್. ಶಂಕರಮೂರ್ತಿ,<br>ವಿಧಾನ ಪರಿಷತ್ ಸಭಾಪತಿಗಳು<br><br>ಕೆ. ಬಿ. ಕೋಳಿವಾಡ,<br>ವಿಧಾನಸಭಾಧ್ಯಕ್ಷರು<br><br>**ಅಧ್ಯಕ್ಷತೆ:**<br><br>ಆರ್.ರೋಷನ್ ಬೇಗ್,<br>ನಗರಾಭಿವೃದ್ಧಿ ಹಾಗೂ ಹಜ್ ಸಚಿವರು. | 16-09-2016<br>ಶುಕ್ರವಾರ<br>ಸಂಜೆ<br>6-00 ಗಂಟೆಗೆ | ಬ್ಯಾಂಕ್ವೆಟ್ ಹಾಲ್,<br>ವಿಧಾನಸೌಧ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

**ಪತ್ರಿಕಾ ಪ್ರಕಟಣೆ**

## ಶಿಷ್ಯವೇತನಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು ಸೆಪ್ಟೆಂಬರ್ 15 (ಕರ್ನಾಟಕ ವಾರ್ತೆ)

ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯು ವಿಶೇಷ ಘಟಕ ಯೋಜನೆಯಡಿ ಪರಿಶಿಷ್ಟ ಜಾತಿ ಹಾಗೂ ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ 2016-17ನೇ ಸಾಲಿನಲ್ಲಿ ಶಿಷ್ಯವೇತನ ನೀಡಲು ಅರ್ಜಿ ಆಹ್ವಾನಿಸಿದೆ.

ಕರ್ನಾಟಕ ಸಂಗೀತ, ಹಿಂದೂಸ್ತಾನಿ ಸಂಗೀತ, ನೃತ್ಯ, ಸುಗಮ ಸಂಗೀತ, ಕಥಾಕೀರ್ತನ ಹಾಗೂ ಗಮಕ ಕಲಾ ಪ್ರಕಾರಗಳಲ್ಲಿ ಅಭ್ಯಾಸ ಮಾಡುತ್ತಿರುವ 15 ರಿಂದ 25 ವರ್ಷದ ವಯೋಮಿತಿಯ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

ಸಂದರ್ಶನದಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ರೂ.20,000/- ಗಳ ಶಿಷ್ಯವೇತನವನ್ನು ನೀಡಲಾಗುವುದು ಅರ್ಜಿಗಳನ್ನು ಅಕಾಡೆಮಿ ಕಚೇರಿ ವೇಳೆಯಲ್ಲಿ ಉಚಿತವಾಗಿ ಪಡೆಯಬಹುದು.

ಬೇರೆ ಬೇರೆ ಜಿಲ್ಲೆಯ ಅಭ್ಯರ್ಥಿಗಳು ಆಯಾ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಉಚಿತವಾಗಿ ಅರ್ಜಿಗಳನ್ನು ಪಡೆಯಬಹುದಾಗಿದೆ. ಅರ್ಜಿಯ ಜೊತೆ ಪಠ್ಯಕ್ರಮ ಹಾಗೂ ಸೂಚನೆಯ ಪ್ರತಿ ನೀಡಲಾಗಿದೆ. ಅಂಚೆ ಮೂಲಕ ಅರ್ಜಿ ಪಡೆಯಲಿಚ್ಛಿಸುವವರು ರೂ 10/- ಸ್ಟಾಂಪ್ ಹಚ್ಚಿದ ಸ್ವವಿಳಾಸವುಳ್ಳ ಲಕೋಟೆಯನ್ನು ರಿಜಿಸ್ಟ್ರಾರ್, ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು – 560 002 ಇಲ್ಲಿಗೆ ಕಳುಹಿಸಿಕೊಡಬೇಕು. ಭರ್ತಿಮಾಡಿದ ಅರ್ಜಿಗಳನ್ನು ಸಲ್ಲಿಸಲು ಸೆಪ್ಟೆಂಬರ್ 27 ಕೊನೆಯ ದಿನವಾಗಿರುತ್ತದೆ.

ಹೆಚ್‌ಕೆ/ಪಿಎಸ್‌ಐ:ಜಿಪಿಆರ್

## ಫೆಲೋಶಿಪ್‌ಗಾಗಿ ಅರ್ಜಿ ಆಹ್ವಾನ

ಬೆಂಗಳೂರು ಸೆಪ್ಟೆಂಬರ್ 15 (ಕರ್ನಾಟಕ ವಾರ್ತೆ)

ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯ ವ್ಯಾಪ್ತಿಗೆ ಒಳಪಡುವ ಸಂಗೀತ ನೃತ್ಯಾದಿ ಕಲೆಗಳಲ್ಲಿ ಹೆಚ್ಚಿನ ಸಂಶೋಧನೆ/ಅಧ್ಯಯನ ಮಾಡಲು 2016-17ನೇ ಸಾಲಿನಲ್ಲಿ ವಿಶೇಷ ಘಟಕ ಯೋಜನೆಯಡಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಪರಿಣಿತ ಕಲಾವಿದರು/ತಜ್ಞರಿಂದ ಸಂಶೋಧನೆಗಾಗಿ-ಫೆಲೋಶಿಪ್ ಅರ್ಜಿಗಳನ್ನು ಈಗಾಗಲೇ ಆಹ್ವಾನಿಸಲಾಗಿದೆ. ಸಂಶೋಧನಾರ್ಥಿಗಳು ಸ್ನಾತಕೋತ್ತರ ಪದವೀಧರರಾಗಿರಬೇಕು. ವಯೋಮಿತಿ 45 ವರ್ಷ ಮೀರಿರಬಾರದು.

ಆಸಕ್ತರು ಸಂಶೋಧನೆ/ಅಧ್ಯಯನ ನಡೆಸುವ ವಿಷಯದ ಬಗ್ಗೆ ಸುಮಾರು 5-6 ಪುಟಗಳ ಸಾರಲೇಖವನ್ನು ಅರ್ಜಿಯೊಂದಿಗೆ ಸಲ್ಲಿಸಬೇಕು. ಅಧ್ಯಯನದ ಅವಧಿ ಆರು ತಿಂಗಳು. ಅರ್ಹ ಅಭ್ಯರ್ಥಿಗಳನ್ನು ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು. ಆಯ್ಕೆಯಾದವರಿಗೆ ರೂ 1.00 ಲಕ್ಷ ಸಂಶೋದನಾ ನೆರವನ್ನು ನೀಡಲಾಗುವುದು. ಆಯ್ಕೆಯಲ್ಲಿ ಅಕಾಡೆಮಿ ತೀರ್ಮಾನವೇ ಅಂತಿಮ.

ರಾಜ್ಯದ ವಿವಿಧ ಜಿಲ್ಲೆಗಳ ಅಭ್ಯರ್ಥಿಗಳು ಆಯಾ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಉಚಿತವಾಗಿ ಅರ್ಜಿಗಳನ್ನು ಪಡೆಯಬಹುದಾಗಿದೆ. ಅರ್ಜಿಯ ಜೊತೆ ಸೂಚನೆಯ ಪ್ರತಿ ನೀಡಲಾಗಿದೆ. ಅಂಚೆ ಮೂಲಕ ಅರ್ಜಿ ಪಡೆಯಲಿಚ್ಛಿಸುವವರು ರೂ 10/-

ಸ್ಟಾಂಪ್ ಹಚ್ಚಿದ ಸ್ವವಿಳಾಸವುಳ್ಳ ಲಕೋಟೆಯನ್ನು ರಿಜಿಸ್ಟ್ರಾರ್, ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು – 560 002 ಇಲ್ಲಿಗೆ ಕಳುಹಿಸಿಕೊಡಬೇಕು. ಅಲ್ಲದೇ ಅರ್ಜಿಗಳನ್ನು ಅಕಾಡೆಮಿ email:karnatakasangeeta@gmail.com ಮೂಲಕ ಭರ್ತಿಮಾಡಿದ ಅರ್ಜಿಗಳನ್ನು ಸಲ್ಲಿಸಲು ಸೆಪ್ಟೆಂಬರ್ 27 ಕೊನೆಯ ದಿನವಾಗಿರುತ್ತದೆ.

ಹೆಚ್‌ಕೆ/ ಪಿಎಸ್‌ಐ:ಜಿಪಿಆರ್

## ವಿದ್ಯಾರ್ಥಿ ವೇತನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

ಬೆಂಗಳೂರು ಸೆಪ್ಟೆಂಬರ್ 15 (ಕರ್ನಾಟಕ ವಾರ್ತೆ)

2016–17 ನೇ ಸಾಲಿನಲ್ಲಿ ಮೆಟ್ರಿಕ್ ಪೂರ್ವ ($9^{th}$ & $10^{th}$ ) ಮೆಟ್ರಿಕ್ ನಂತರದ ವಿದ್ಯಾರ್ಥಿವೇತನದ ಯೋಜನೆ ಕಾರ್ಯಕ್ರಮಗಳಿಗೆ ಆನ್‌ಲೈನ್ ಮೂಲಕ ಎನ್.ಎಸ್.ಪಿ. (ನ್ಯಾಷನಲ್ ಸ್ಕಾಲರ್‌ಶಿಪ್ ಪೋರ್ಟಲ್) ನಲ್ಲಿ ಸಲ್ಲಿಸಬಹುದಾಗಿದೆ.

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುವ ಮೆಟ್ರಿಕ್ ಪೂರ್ವ ($9^{th}$ & $10^{th}$ ) ವಿದ್ಯಾರ್ಥಿ ವೇತನ, ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಮಂಜೂರಾತಿಗಾಗಿ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದ್ದು, ಅರ್ಜಿ ಸಲ್ಲಿಸಲು ವಿದ್ಯಾರ್ಥಿಗಳು www.scholarships.gov.in ವೆಬ್‌ಸೈಟ್‌ನ ಮೂಲಕ ಅರ್ಜಿಗಳನ್ನು ಸೆಪ್ಟೆಂಬರ್ 30 ರೊಳಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಎಲ್ಲಾ ದಾಖಲಾತಿಗಳೊಂದಿಗೆ ಆಧಾರ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸಿ ಅರ್ಜಿಯಲ್ಲಿ ನಮೂದಿಸಿರುವ ಉಳಿತಾಯ ಬ್ಯಾಂಕ್ ಖಾತೆ ಸಂಖ್ಯೆಯೊಂದಿಗೆ ಆಯಾ ಬ್ಯಾಂಕಿಗೆ ಭೇಟಿನೀಡಿ ಸೀಡಿಂಗ್ ಮಾಡಿಸಿರಬೇಕು. ಆಧಾರ್ ಸಂಖ್ಯೆಯನ್ನು ನಮೂದಿಸದೇ ಇರುವ ಹಾಗೂ ಆಧಾರ್ ಸಂಖ್ಯೆಯ ವಿವರಗಳನ್ನು ತಮ್ಮ ವೈಯಕ್ತಿಕ ಉಳಿತಾಯ ಬ್ಯಾಂಕ್ ಖಾತೆಯಲ್ಲಿ ಸೀಡಿಂಗ್ ಮಾಡಿಸದ ವಿದ್ಯಾರ್ಥಿಗಳು ಈ ಸೌಲಭ್ಯಗಳನ್ನು ಪಡೆಯುವಲ್ಲಿ ವಿಫಲರಾಗುತ್ತಾರೆ.

ಹೆಚ್ಚಿನ ವಿವರಗಳಿಗಾಗಿ ಜಿಲ್ಲಾ/ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳನ್ನು ಕೂಡಲೇ ಸಂಪರ್ಕಿಸಲು ಕೋರಿದೆ. ಅರ್ಜಿ ಸಲ್ಲಿಸುವಾಗ ಯಾವುದಾದರೂ ತಾಂತ್ರಿಕ ತೊಂದರೆ ಉಂಟಾದಲ್ಲಿ ಸಹಾಯವಾಣಿ 0120–6619540 ಸಂಪರ್ಕಿಸಲು ಕೋರಿದೆ.

ಹೊಸದಾಗಿ ಅರ್ಜಿ ಸಲ್ಲಿಸಲು "new user? Register now" ಎಂಬ ಗುಂಡಿಯ ಮೇಲೆ ಕ್ಲಿಕ್ ಮಾಡುವುದು ಹಾಗು ಈಗಾಗಲೇ 2015–16 ನೇ ಸಾಲಿನಲ್ಲಿ NSP ಯಲ್ಲಿ (Fresh and Renewal) ಎಂದು ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳು ಕೂಡ 2016–17 ನೇ ಸಾಲಿಗೆ ಹೊಸದಾಗಿ Fresh ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್/ಕೆಪಿಎಸ್ಐ:ಜಿಪಿಆರ್

# ಶಿಕ್ಷಕರ ಮಕ್ಕಳ ಉನ್ನತ ವ್ಯಾಸಂಗಕ್ಕಾಗಿ ಧನ ಸಹಾಯಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು ಸೆಪ್ಟೆಂಬರ್ 15 (ಕರ್ನಾಟಕ ವಾರ್ತೆ)

2016–17 ನೇ ಶೈಕ್ಷಣಿಕ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿರುವ ಶಿಕ್ಷಕರ ಮಕ್ಕಳ ಉನ್ನತ ವ್ಯಾಸಂಗಕ್ಕಾಗಿ ಧನಸಹಾಯ ನೀಡುವ ಸಲುವಾಗಿ ರಾಷ್ಟ್ರೀಯ ಶಿಕ್ಷಕರ ಕಲ್ಯಾಣ ಪ್ರತಿಷ್ಠಾನದಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ಶಿಕ್ಷಕರು ಆಯಾ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ನಿಧಿಗಳ ಕಚೇರಿಗೆ ಭರ್ತಿಮಾಡಿದ ಅರ್ಜಿಗಳನ್ನು ಅಕ್ಟೋಬರ್ 31 ರೊಳಗೆ ಸಲ್ಲಿಸಬಹುದಾಗಿದೆ.

ಪದವಿಪೂರ್ವ ಕಾಲೇಜುಗಳು ಹಾಗೂ ಮೇಲ್ಪಟ್ಟ ವಿದ್ಯಾಸಂಸ್ಥೆಗಳ ಉಪನ್ಯಾಸಕರುಗಳು ಮತ್ತು ಪ್ರಾಚಾರ್ಯರು ಅವರ ಮೇಲಾಧಿಕಾರಿಗಳ ಮುಖಾಂತರ ಅಕ್ಟೋಬರ್ 31 ರೊಳಗೆ ಅರ್ಜಿಗಳನ್ನು ನಿಧಿಗಳ ಕಚೇರಿಗೆ ಸಲ್ಲಿಸಬೇಕು.

ಅರ್ಜಿ ನಮೂನೆಗಳನ್ನು ಸಾರ್ವಜನಿಕ ಶಿಕ್ಷಣ ಇಲಾಖೆಯ ಅಂತರ್ಜಾಲದಿಂದ **www.schooleducation.kar.nic.in** ಡೌನ್‌ಲೋಡ್ ಮಾಡಿಕೊಳ್ಳಬಹುದು.

ಹೆಚ್ಕೆ/ ಪಿಎಸ್ಐ:ಜಿಪಿಆರ್

# ಪ್ರಾಥಮಿಕ ಶಾಲಾ ಶಿಕ್ಷಕ ವೃಂದದ ಅಂತಿಮ ಆದ್ಯತಾ ಪಟ್ಟಿ ಪ್ರಕಟ

ಬೆಂಗಳೂರು ಸೆಪ್ಟೆಂಬರ್ 15 (ಕರ್ನಾಟಕ ವಾರ್ತೆ)

2016–17 ನೇ ಸಾಲಿನಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ದಕ್ಷಿಣ ಜಿಲ್ಲೆಯೊಳಗಿನ ವರ್ಗಾವಣೆಗಾಗಿ ಅರ್ಜಿ ಸಲ್ಲಿಸಿರುವ ಪ್ರಾಥಮಿಕ ಶಾಲಾ ಶಿಕ್ಷಕ ವೃಂದದ ಶಿಕ್ಷಕರ ಅಂತಿಮ ಆದ್ಯತಾ ಪಟ್ಟಿಯನ್ನು ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಜಿಲ್ಲಾ ಉಪ ನಿರ್ದೇಶಕರ ಕಚೇರಿಯಲ್ಲಿ ಪ್ರಕಟಿಸಲಾಗಿದೆ.

ಈ ಕೌನ್ಸಿಲಿಂಗ್ ಮೂರು ದಿನಗಳವರೆಗೆ ಬಿ.ಆರ್.ಸಿ. ಕೇಂದ್ರ, ದಕ್ಷಿಣ ವಲಯ, ಟಿನ್ ಶಾಲೆ, ಗಾಂಧಿ ಬಜಾರ್, ಬೆಂಗಳೂರು – 560 004 ನಡೆಯಲಿದ್ದು, ಸೆಪ್ಟೆಂಬರ್ 16 ರಂದು ಬೆಳಿಗ್ಗೆ 10–00 ಗಂಟೆಯಿಂದ ಕ್ರಮ ಸಂಖ್ಯೆ 1 ರಿಂದ 150 ರವರೆಗೆ, ಸೆಪ್ಟೆಂಬರ್ 17 ರಂದು ಬೆಳಿಗ್ಗೆ 9–00

ಗಂಟೆಯಿಂದ ಕ್ರಮ ಸಂಖ್ಯೆ 151 ರಿಂದ 350 ರವರೆಗೆ ಹಾಗೂ ಸೆಪ್ಟೆಂಬರ್ 18 ರಂದು ಬೆಳಿಗ್ಗೆ 9–00 ಗಂಟೆಯಿಂದ ಕ್ರಮ ಸಂಖ್ಯೆ 351 ಉಳಿದ ಎಲ್ಲಾ ಸಹ ಶಿಕ್ಷಕರುಗಳು, ಪದವೀಧರೇತರ ಮುಖ್ಯ ಶಿಕ್ಷಕರು, ಬಡ್ತಿ ಮುಖ್ಯ ಶಿಕ್ಷಕರು, ದೈಹಿಕ ಶಿಕ್ಷಣ ಶಿಕ್ಷಕರು ಮತ್ತು ಇತರೆ ಶಿಕ್ಷಕರಿಗೆ ಅಂದು ಕೌನ್ಸಿಲಿಂಗ್ ನಡೆಯಲಿದೆ.

ವರ್ಗಾವಣಾ ಆದ್ಯತಾ ಪಟ್ಟಿ ಹಾಗೂ ಖಾಲಿ ಹುದ್ದೆಗಳ ಮಾಹಿತಿಯನ್ನು ಇಲಾಖೆಯ ಅಂತರ್ಜಾಲದಿಂದ www.schooleducation.kar.nic.in ನಲ್ಲಿ ವೀಕ್ಷಿಸಬಹುದಾಗಿದೆ.

ಹೆಚ್‌ಕೆ/ಪಿಎಸ್‌ಐ:ಜಿಪಿಆರ್

## ಚಿಂತಲಪಲ್ಲಿ ರಾಮಚಂದ್ರರಾಯರ ಜನ್ಮ ಶತಮಾನೋತ್ಸವಕ್ಕೆ ಸಕಲ ಸಿದ್ಧತೆ

ಬೆಂಗಳೂರು ಸೆಪ್ಟೆಂಬರ್ 15 (ಕರ್ನಾಟಕ ವಾರ್ತೆ

ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯು 2016–17 ನೇ ಸಾಲಿನಲ್ಲಿ ಕಲಾವಿದರ ಶತಮಾನೋತ್ಸವ ಯೋಜನೆಯಡಿ ಚಿಂತಲಪಲ್ಲಿ ರಾಮಚಂದ್ರರಾಯರ ಶತಮಾನೋತ್ಸವವನ್ನು ಸೆಪ್ಟೆಂಬರ್ 16 ರಂದು ಬೆಳಿಗ್ಗೆ 10–00 ಗಂಟೆಗೆ ನಗರದ ಜೆ.ಸಿ.ರಸ್ತೆಯಲ್ಲಿರುವ ಕನ್ನಡ ಭವನದ "ನಯನ ಸಭಾಂಗಣ" ದಲ್ಲಿ ಹಮ್ಮಿಕೊಂಡಿದೆ.

ಅಂದು ಬೆಳಿಗ್ಗೆ 10–00 ಗಂಟೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕ ಕೆ.ಎ. ದಯಾನಂದ ಅವರು ಸಮಾರಂಭದ ಉದ್ಘಾಟನೆಯನ್ನು ನೆರವೇರಿಸುವರು ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯ ಅಧ್ಯಕ್ಷೆ ಶ್ರೀಮತಿ ಗಂಗಮ್ಮ ಕೇಶವಮೂರ್ತಿ ಅವರು ಅಧ್ಯಕ್ಷತೆ ವಹಿಸುವರು. ಮಹಾರಾಣಿ ಕಾಲೇಜಿನ ಸಂಗೀತ ವಿಭಾಗದ ಮುಖ್ಯಸ್ಥರಾದ ಶ್ರೀಕಾಂತಂ ನಾಗೇಂದ್ರ ಶಾಸ್ತ್ರಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಹೆಚ್‌ಕೆ/ಪಿಎಸ್‌ಐ:ಜಿಪಿಆರ್

## ಗ್ರಾಮೀಣಾಭಿವೃದ್ಧಿ ಸಚಿವರ ಸಾಂತ್ವಾನ

ಬೆಂಗಳೂರು ಸೆಪ್ಟೆಂಬರ್ 15 – (ಕರ್ನಾಟಕ ವಾರ್ತೆ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾದ ಹೆಚ್.ಕೆ. ಪಾಟೀಲ್ ಅವರು ಇಂದು ಕುಣಿಗಲ್ ತಾಲ್ಲೂಕಿನ ಬಾಗೇನಹಳ್ಳಿ ಪಂಚಾಯತಿ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ

ಉದ್ಯೋಗ ಖಾತ್ರಿ ಯೋಜನೆಯ ತಾಂತ್ರಿಕ ಸಮಾಲೋಚಕ ಎಚ್.ಆರ್. ಶ್ರೀನಿವಾಸ್ ಅವರ ಮೇಲೆ ನಕಲಿ ಬಿಲ್ ಪಾವತಿಸಲು ಒತ್ತಡ ಹೇರಿ ಅದಕ್ಕೆ ಒಪ್ಪದಿದ್ದಾಗ ಅವರ ಮೇಲೆ ಹಲ್ಲೆ ನಡೆಸಿದ ಘಟನೆ ಸಂಬಂಧ ಬೆಂಗಳೂರಿನ ಆರ್.ಟಿ. ನಗರದಲ್ಲಿರುವ ಅವರ ಸಹೋದರಿ ಮನೆಗೆ ಭೇಟಿ ನೀಡಿ ಸಾಂತ್ವಾನ ಹೇಳಿದರು.

ಛಾಯಚಿತ್ರ ಇದರೊಂದಿಗೆ ಲಗತ್ತಿಸಿದೆ)

---

## ಮಹಾತ್ಮ ಗಾಂಧೀ ಸೇವಾ ಪ್ರಶಸ್ತಿ – ಕರ್ನಾಟಕ  ಆಯ್ಕೆಗೆ ಅರ್ಜಿ ಆಹ್ವಾನ

**ಬೆಂಗಳೂರು ಸೆಪ್ಟೆಂಬರ್ 15 – (ಕರ್ನಾಟಕ ವಾರ್ತೆ)**

ರಾಜ್ಯ ಸರ್ಕಾರವು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಸ್ಥಾಪಿಸಿರುವ ಐದು ಲಕ್ಷ ರೂಪಾಯಿ ನಗದನ್ನು ಒಳಗೊಂಡ “ಮಹಾತ್ಮಗಾಂಧೀ ಸೇವಾ ಪ್ರಶಸ್ತಿ-ಕರ್ನಾಟಕ”ಗೆ ಪ್ರಸಕ್ತ ಸಾಲಿಗೆ ಅರ್ಹ ಸಾಧಕರನ್ನು ಅಥವಾ ಸಂಘ ಸಂಸ್ಥೆಗಳನ್ನು ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸಾರ್ವಜನಿಕ ಜೀವನದಲ್ಲಿ ಮಹಾತ್ಮಗಾಂಧೀಜಿಯವರ ಆದರ್ಶಗಳನ್ನು ಅಳವಡಿಸಿಕೊಂಡು ಜೀವನ ನಡೆಸುತ್ತಿರುವ ಕನಿಷ್ಠ 60 ವರ್ಷಗಳಾಗಿರುವ ವ್ಯಕ್ತಿಗಳು ಅಥವಾ 25 ವರ್ಷಗಳು ತುಂಬಿರುವ ಸೇವಾ ಸಂಸ್ಥೆಗಳನ್ನು ಈ ಪ್ರಶಸ್ತಿಗೆ ಪರಿಗಣಿಸಲಾಗುವುದು.  ಪ್ರಶಸ್ತಿಯನ್ನು ಆಯ್ಕೆ ಮಾಡಲು ಆಯ್ಕೆ ಸಮಿತಿಯನ್ನು ರಚಿಸಲಾಗುವುದು.  2016 ರ ಅಕ್ಟೋಬರ್ 02 ರಂದು ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಮಹಾತ್ಮಗಾಂಧೀಜಿಯವರು ಪ್ರಚುರುಪಡಿಸಿದ ಜನಪರ ಕಾರ್ಯಕ್ರಮಗಳಾದ ಅಸ್ಪೃಶ್ಯತೆ ನಿವಾರಣೆ, ಅಹಿಂಸೆ, ಮಹಿಳಾ ಸಬಲೀಕರಣ, ಗ್ರಾಮೀಣ ನೈರ್ಮಲ್ಯ, ಮದ್ಯಪಾನ ವಿರೋಧಿ ನೀತಿ, ಖಾದಿ ಮತ್ತು ಸ್ವದೇಶಿವಸ್ತು ಬಳಕೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉದ್ಧಾರ, ಈ ಕ್ಷೇತ್ರಗಳಲ್ಲಿ ಸ್ವಯಂ ಪ್ರೇರಣೆಯಿಂದ ತೊಡಗಿರುವ ವ್ಯಕ್ತಿಗಳು ಅಥವಾ ಸಂಸ್ಥೆಗಳು ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು.  ಸಂಘ ಸಂಸ್ಥೆಗಳು ಅಥವಾ ವ್ಯಕ್ತಿಗಳು ಶಿಫಾರಸ್ಸನ್ನು ಕೂಡ ಮಾಡಬಹುದಾಗಿದೆ.  ಸೆಪ್ಟೆಂಬರ್ 20, 2016 ರ ಒಳಗಾಗಿ ಅರ್ಜಿಗಳನ್ನು ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಸೌಧ, ನಂ. 17, ಭಗವಾನ್ ಮಹಾವೀರ ರಸ್ತೆ (ಇನ್‌ಫೆಂಟ್ರಿ ರಸ್ತೆ), ಬೆಂಗಳೂರು-560 001 ಅಥವಾ ಇ-ಮೇಲ್ : vartheinfohub@gmail.com ವಿಳಾಸಕ್ಕೆ ಕಳುಹಿಸಬಹುದಾಗಿದೆ.

## ಕ್ರೀಡಾ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಮೂಂದೂಡಿಕೆ

**ಬೆಂಗಳೂರು ಸೆಪ್ಟೆಂಬರ್ 15 – (ಕರ್ನಾಟಕ ವಾರ್ತೆ)**

ಹಿರಿಯ ನಾಗರಿಕರ ದಿನಾಚರಣೆಯ ಅಂಗವಾಗಿ ಬೆಂಗಳೂರಿನಲ್ಲಿ ಹಿರಿಯ ನಾಗರೀಕರಿಗಾರಿ ಸೆಪ್ಟೆಂಬರ್ 15 ರಂದು ಮತ್ತು 16 ರಂದು ಏರ್ಪಡಿಸಿದ್ದ ರಾಜ್ಯಮಟ್ಟದ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ವರ್ಧೆಗಳನ್ನು ಮೂಂದೂಡಲಾಗಿದೆ.

ಹಿರಿಯ ನಾಗರಿಕರ ಈ ಸ್ವರ್ಧೆಗಳು ಸೆಪ್ಟೆಂಬರ್ 19 ಮತ್ತು 20 ರಂದು ನಡೆಯಲಿದ್ದು, ಸೆಪ್ಟೆಂಬರ್ 19 ರಂದು ಕ್ರೀಡಾ ಹಾಗೂ ಸೆಪ್ಟೆಂಬರ್ 20 ರಂದು ಸಾಂಸ್ಕೃತಿಕ ಸ್ವರ್ಧೆಗಳು ನಡೆಯಲಿವೆ ಎಂದು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ನಿರ್ದೇಶಕ ಗೋವಿಂದರಾಜು ಅವರು ತಿಳಿಸಿದ್ದಾರೆ.

ಅಕ್ಟೋಬರ್ 01 ರಂದು ರಾಜ್ಯಮಟ್ಟದ ಹಿರಿಯ ನಾಗರೀಕರ ದಿನಾಚರಣೆಯನ್ನು ಮೈಸೂರಿನಲ್ಲಿ ಏರ್ಪಡಿಸಲು ಉದ್ದೇಶಿಸಲಾಗಿದ್ದು, ಮುಖ್ಯಮಂತ್ರಿಗಳು ಈ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್‌ಕೆ/ಕೆಎಂ